# ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ

ಜ್ಞಾನ ಸಾಗರ ಆವರಣ, ವಿನಾಯಕನಗರ, ಕಂಟೋನ್ಮೆಂಟ್, ಬಳ್ಳಾರಿ – 583104

ಕುಲಸಚಿವರು (ಮೌಲ್ಯಮಾಪನ) ದೂರವಾಣಿ: 08392-24011

ಸಂಖ್ಯೆ: ವಿಶ್ರೀಕೃವಿಬ/ಪರೀಕ್ಷಾ/ಸ್ನಾತಕ/ಮ.ಮೌ/2020-21/1018 ದಿನಾಂಕ: 24/10/2020

## ಅಧಿಸೂಚನೆ

ವಿಷಯ: ಸ್ನಾತಕ ಹಾಗೂ ಬಿ.ಇಡಿ ಪದವಿಯ ಮರು ಎಣಿಕೆ, ಛಾಯಾ ಪ್ರತಿ ಹಾಗೂ ಮರು ಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸುವ ಕುರಿತು.

ಉಲ್ಲೇಖ: ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:

*****

ಸೆಪ್ಟಂಬರ್/ಅಕ್ಟೋಬರ್-2020ರ ತಿಂಗಳಿನಲ್ಲಿ ಜರುಗಿದ ಎಲ್ಲಾ ಸ್ನಾತಕ ಪದವಿ ಪರೀಕ್ಷೆಗಳ 6ನೇ ಸೆಮಿಸ್ಟರ್ (Regular) & (Repeater) ಹಾಗೂ 2ನೇ ಮತ್ತು 4ನೇ ಸೆಮಿಸ್ಟರ್ (Repeater) ವಿದ್ಯಾರ್ಥಿಗಳ ಹಾಗೂ ಬಿ.ಇಡಿ 1ನೇ, 3ನೇ (Repeater) ಉತ್ತರ ಪತ್ರಿಕೆಗಳ ಮರು ಎಣಿಕೆ, ಛಾಯಾ ಪ್ರತಿ ಹಾಗೂ ಮರು ಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸಲು ಹಾಗೂ ಶುಲ್ಕ ಪಾವತಿಸಲು ದಿನಾಂಕಗಳು ಈ ಕೆಳಗಿನಂತಿವೆ.

| ಕ್ರ.ಸಂ | ವಿವರ | ಶುಲ್ಕ | ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ |
|---|---|---|---|
| 01 | ಮರು ಎಣಿಕೆ | ಒಂದು ವಿಷಯಕ್ಕೆ 209/-<br>ಬಿ.ಇಡಿ – 309/- | 27.10.2020 ರಿಂದ 02.11.2020 ವರೆಗೆ (ದಂಡ ಶುಲ್ಕವಿಲ್ಲದೆ) |
| 02 | ಛಾಯಾ ಪ್ರತಿ | ಒಂದು ವಿಷಯಕ್ಕೆ 418/-<br>ಬಿ.ಇಡಿ – 704/- | 03.11.2020 ರಿಂದ 05.11.2020 ವರೆಗೆ ದಿನಕ್ಕೆ ರೂ. 200/- ದಂಡ ಶುಲ್ಕ |
| 03 | ಮರು ಮೌಲ್ಯಮಾಪನ | ಒಂದು ವಿಷಯಕ್ಕೆ 974/-<br>ಬಿ.ಇಡಿ – 1210/- | 06.11.2020 ರಿಂದ 12.11.2020 ವರೆಗೆ (ದಂಡ ಶುಲ್ಕವಿಲ್ಲದೆ)<br>13.11.2020 ರಿಂದ 16.11.2020 ವರೆಗೆ ದಿನಕ್ಕೆ ರೂ. 200/- ದಂಡ ಶುಲ್ಕ |

**ಸೂಚನೆಗಳು:**

1. ಮರು ಎಣಿಕೆ, ಛಾಯಾ ಪ್ರತಿ ಹಾಗೂ ಮರು ಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸಲು ಬಯಸುವ ವಿದ್ಯಾರ್ಥಿಗಳು ವೆಬ್‌ಸೈಟ್‌ನ್ನು ಸಂಪರ್ಕಿಸಿ (ವೆಬ್‌ಸೈಟ್ ವಿಳಾಸ: www.vskub.ac.in & results.logisys/vskub) ಆನ್‌ಲೈನ್ ಮೂಲಕ ನಿಗಧಿತ ದಿನಾಂಕದೊಳಗೆ ಅರ್ಜಿ ಸಲ್ಲಿಸತಕ್ಕದ್ದು.
2. ಆನ್‌ಲೈನ್ ಪೋರ್ಟಲ್‌ನಲ್ಲಿ ಫಲಿತಾಂಶ ವೀಕ್ಷಿಸಿದ ನಂತರ ಮರು ಎಣಿಕೆ, ಛಾಯಾ ಪ್ರತಿ ಹಾಗೂ ಮರು ಮೌಲ್ಯಮಾಪನ ಆಯ್ಕೆ ಮಾಡಿ click ಮಾಡಬೇಕು.
3. ಮರು ಎಣಿಕೆ, ಛಾಯಾ ಪ್ರತಿ ಹಾಗೂ ಮರು ಮೌಲ್ಯಮಾಪನಕ್ಕಾಗಿ ಯಾವ ಯಾವ ವಿಷಯಗಳಲ್ಲಿ ಅರ್ಜಿ ಸಲ್ಲಿಸಬೇಕೊ ಅವುಗಳನ್ನು ಆಯ್ಕೆ ಮಾಡಿಕೊಳ್ಳತಕ್ಕದ್ದು.
4. ಮರು ಎಣಿಕೆ, ಛಾಯಾ ಪ್ರತಿ ಹಾಗೂ ಮರು ಮೌಲ್ಯಮಾಪನಕ್ಕಾಗಿ ಯಾವ ಯಾವ ವಿಷಯಗಳಲ್ಲಿ ಅರ್ಜಿ ಸಲ್ಲಿಸಬೇಕೊ ಅವುಗಳನ್ನು ಆಯ್ಕೆ ಮಾಡಿದ ತಕ್ಷಣ ಅದಕ್ಕೆ ಸಂಬಂಧಿಸಿದ ಶುಲ್ಕ ಪ್ರಕಟಗೊಳ್ಳುವುದು. ನಂತರ ಶುಲ್ಕ ಪಾವತಿಸುವ ಬಗೆಯನ್ನು ಆಯ್ದುಕೊಂಡ ಮೇಲೆ ಅರ್ಜಿ ಹಾಗೂ ಚಲನ್‌ಗಳ ಮುದ್ರಿತ ಪ್ರತಿಯನ್ನು ತೆಗೆದುಕೊಂಡು ಹತ್ತಿರದ ಅಂಚೆ ಕಛೇರಿಯಲ್ಲಿ ಶುಲ್ಕವನ್ನು ಪಾವತಿಸಿ ಅರ್ಜಿ ಹಾಗೂ ಚಲನ್ ಪ್ರತಿಯನ್ನು ತಮ್ಮ ಬಳಿಯೇ ಇರಿಸಿಕೊಳ್ಳತಕ್ಕದ್ದು.
5. ಶುಲ್ಕ ಪಾವತಿಸಿದ ನಂತರ ಬರುವ Unique Application Number ನ್ನು ವಿಶ್ವವಿದ್ಯಾಲಯದ ಜೊತೆ ಮಾಡುವ ಪತ್ರ ವ್ಯವಹಾರಗಳಲ್ಲಿ ನಮೂದಿಸಬೇಕು.
6. ಮರು ಎಣಿಕೆ ಮತ್ತು ಮರು ಮೌಲ್ಯಮಾಪನದ ಫಲಿತಾಂಶವನ್ನು ವಿಶ್ವವಿದ್ಯಾಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು ಹಾಗೂ ಛಾಯಾ ಪ್ರತಿಯನ್ನು ವಿದ್ಯಾರ್ಥಿಗಳ ಈ-ಮೇಲ್ ವಿಳಾಸಕ್ಕೆ ಕಳುಹಿಸಲಾಗುವುದು.
7. ವಿದ್ಯಾರ್ಥಿಗಳು ತಮ್ಮ ಈ-ಮೇಲ್ ವಿಳಾಸವನ್ನು ಕಡ್ಡಾಯವಾಗಿ ಅರ್ಜಿಯಲ್ಲಿ ನಮೂದಿಸತಕ್ಕದ್ದು ಹಾಗೂ ತಪ್ಪಾಗಿ ನಮೂದಿಸುವ ಈ-ಮೇಲ್ ವಿಳಾಸಕ್ಕೆ ವಿದ್ಯಾರ್ಥಿಗಳೇ ಹೊಣೆಗಾರರಾಗಿರುತ್ತಾರೆ.
8. ಛಾಯಾ ಪ್ರತಿಯನ್ನು ಪಡೆದುಕೊಂಡ ನಂತರ ಉತ್ತರ ಪತ್ರಿಕೆಯ ಅಂಕಗಳ ಎಣಿಕೆಯಲ್ಲಿ ಏನಾದರೂ ವ್ಯತ್ಯಾಸ ಕಂಡುಬಂದಲ್ಲಿ ಅದನ್ನು ಒಂದು ವಾರದೊಳಗೆ ಸರಿಪಡಿಸಿಕೊಳ್ಳತಕ್ಕದ್ದು. ನಂತರ ಬಂದ ಅಹವಾಲುಗಳನ್ನು ಸ್ವೀಕರಿಸಲಾಗುವುದಿಲ್ಲ. ಹಾಗೂ ಸದರಿ ಅಧಿಸೂಚನೆಯ ದಿನಾಂಕವನ್ನು ವಿಸ್ತರಿಸಲಾಗುವುದಿಲ್ಲ.

24/10/2020

ಕುಲಸಚಿವರು(ಮೌಲ್ಯಮಾಪನ)
ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ
ಬಳ್ಳಾರಿ

ಪ್ರತಿಗಳು:

1. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿ, ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ. ರವರಿಗೆ ಮಾಹಿತಿಗಾಗಿ.
2. ಹಣಕಾಸು ಅಧಿಕಾರಿಗಳು, ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ. ರವರಿಗೆ ಮಾಹಿತಿಗಾಗಿ.
3. ಮೆ.ಲಾಜಿಸಿಸ್ ವಿಭಾಗ, ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ. ರವರಿಗೆ ಮಾಹಿತಿಗಾಗಿ.
4. ಸಬ್ ಪೋಸ್ಟ್ ಮಾಸ್ಟರ್, ಜ್ಞಾನಸಾಗರ ಅಂಚೆ ಕಛೇರಿ, ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ. ರವರ ಮಾಹಿತಿಗಾಗಿ.
5. ಸೂಪರಿಟೆಂಡೆಂಟ್ ಆಫ್ ಪೋಸ್ಟ್ ಆಫೀಸ್, ಬಳ್ಳಾರಿ ಶಾಖೆ, ಬಳ್ಳಾರಿ.
6. ಕಛೇರಿ ಪ್ರತಿ.